ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಹೌದು. ಸೂಕ್ತ ನಿವೇಶನವನ್ನು ಆರಿಸಲು ಪ್ರಯತ್ನಿಸಲಾಗುತ್ತಿದೆ.

ಆ) ನಿವೇಶನ ದೊರೆತ ಕೂಡಲೇ. ಕಟ್ಟಡದ ಕೆಲಸ ಪ್ರಾರಂಭಿಸಲು. ಕ್ರಮ ಕೈಗೊಳ್ಳಲಾಗುವುದು.

ಶಹಾಪುರ ನ್ಯಾಯಾಲಯ ಕಟ್ಟಡ ನಿರ್ಮಾಣ.

1786. ಶ್ರೀ ಶಿವಶೇಖರಪ್ಪಗೌಡ ತರ್ನಾಳ (ಶಹಾಪುರ್) : ಮಾನ್ಯ ಕಾನೂನು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಶಹಾಪುರದಲ್ಲಿ ನ್ಯಾಯಾಲಯ ಇರುವುದು ನಿಜವಲ್ಲವೆ :

ಆ) ಹಾಗಿದ್ದಲ್ಲಿ. ಈ ನ್ಯಾಯಾಲಯಕ್ಕೆ ಸ್ವಂತ ಕಟ್ಟಡ ಇಲ್ಲದಿರುವುದು ಸರ್ಕಾರದವರಿಗೆ ಗೊತ್ತಿದೆಯೇ :

ಇ) ಸ್ವಂತ ಕಟ್ಟಡಕ್ಕಾಗಿ ಜಾಗವನ್ನು ಸ್ವಾಧೀನಪಡಿಸಿಕೊಳ್ಳುವ ಸಂಬಂಧದಲ್ಲಿ ಎಲ್ಲಾ ಕಾರ್ಯಕ್ರಮಗಳು ಪೂರ್ತಿಯಾಗಿದ್ದು ಜಮೀನಿನ ಮಾಲೀಕರಿಗೆ ಹಣವನ್ನು ಕೊಡುವ ಸಲುವಾಗಿ ಸರ್ಕಾರವು ಬಿಡುಗಡೆ ಮಾಡದಿರುವುದಕ್ಕೆ ಕಾರಣವೇನು :

ಈ) ಸರ್ಕಾರದವರು ಈಗಲಾದರೂ ಹಣ ಬಿಡುಗಡೆ ಮಾಡಿ ಕಟ್ಟಡ ನಿರ್ಮಾಣ ಕಾರ್ಯವನ್ನು ತ್ವರಿತಗೊಳಿಸುವರೆ ?

ಶ್ರೀ ಬ್ಲೇಸಿಯಸ್ ಎಂ. ಡಿಸೋಜ (ಕಾನೂನು ಸಚಿವರು) :

ಅ) ಹೌದು.

ಆ) ಹೌದು.

ಇ) ಈ ವರ್ಷದ 1991-92ರ ಆಯವ್ಯಯದಲ್ಲಿ ಹಣ ದೊರೆಯದೆ ಇರುವುದರಿಂದ ಜಮೀನಿನ ಮಾಲೀಕರಿಗೆ ಭೂ ಸ್ವಾಧೀನದ ಹಣವನ್ನು ಬಿಡುಗಡೆ ಮಾಡಿರುವುದಿಲ್ಲ.

ಈ) ಇದನ್ನು ಪರಿಶೀಲಿಸಲಾಗುತ್ತಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿನ ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಬಗ್ಗೆ.

1790. ಶ್ರೀ ಎಸ್.ಜಿ. ನಾಯಕ್ (ಮೊಳಕಾಲ್ಮೂರು) : ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಚಿತ್ರದುರ್ಗ ಜಿಲ್ಲೆಯಲ್ಲಿನ ಪದವಿಪೂರ್ವ ಕಾಲೇಜುಗಳಲ್ಲಿ. ಪ್ರಥಮ ದರ್ಜೆ ಕಾಲೇಜು. ಪ್ರೌಢ ಶಾಲೆ ಹಾಗೂ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ :

ಆ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ದಿನಾಂಕ 1-8-90 ರಿಂದ 31-12-90ರ ವರೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ 431 ಹಾಗೂ 1-1-91 ರಿಂದ 31-5-91ರ ವರೆಗೆ 128 ಪ್ರಾಥಮಿಕ ಶಾಲಾ ಶಿಕ್ಷಕರ ಯೋಜನೇತರ ಹುದ್ದೆಗಳು ಹಾಗೂ ಕಪ್ಪು ಹಲಗೆ ಕಾರ್ಯಾಚರಣೆ ಯೋಜನೆಯ 3ನೇ ಹಂತದಲ್ಲಿ 198 ಮತ್ತು 4ನೇ ಹಂತದಲ್ಲಿ 271 ಹುದ್ದೆಗಳು ಖಾಲಿ ಇರುತ್ತದೆ.

ಸರ್ಕಾರಿ ಪ್ರೌಢ ಶಾಲೆಗಳಲ್ಲಿ ದಿನಾಂಕ 31-12-91 ರಲ್ಲಿದ್ದಂತೆ 59 ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಪದವಿ ಪೂರ್ವ ಕಾಲೇಜುಗಳಲ್ಲಿ 7 ಉಪನ್ಯಾಸಕ ಹುದ್ದೆಗಳು ಹಾಗೂ ಸ್ವತಂತ್ರ ಪದವಿಪೂರ್ವ ಕಾಲೇಜುಗಳಲ್ಲಿ 1 ಉಪನ್ಯಾಸಕರ ಹುದ್ದೆಗಳು ಖಾಲಿ ಇರುತ್ತವೆ. ಪ್ರಥಮ ದರ್ಜೆ ಕಾಲೇಜುಗಳಲ್ಲಿ ಒಟ್ಟು 36 ಹುದ್ದೆಗಳು ಖಾಲಿ ಇವೆ.

ಆ) ಯೋಜನೇತರ ಅಡಿಯಲ್ಲಿ ಖಾಲಿ ಇರುವ ಹುದ್ದೆಗಳ ಬಗ್ಗೆ ಸರ್ಕಾರವು ಇಡಿ 131 ಪಿಎಮ್‌ಎಸ್ 91 ದಿನಾಂಕ 8-11-91 ಮತ್ತು 27-2-92 ರಲ್ಲಿ ಆರ್ಥಿಕ ಮಿತವ್ಯಯವನ್ನು ಸಡಲಿಸಿ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿಸಿದೆ.

ಇದಲ್ಲದೆ ಕಪ್ಪು ಹಲಗೆ ಯೋಜನೆಯ 3ನೇ ಹಾಗೂ 4ನೇ ಹಂತದ ಕಾರ್ಯಾಚರಣೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಆದೇಶ ಸಂಖ್ಯೆ ಇಡಿ 131 ಪಿಎಂಎಸ್ 91 ದಿನಾಂಕ 17-1-92 ರಲ್ಲಿ ಅನುಮತಿಸಿದ್ದು. ಹೊಂದಾವಣೆ ಮುಖಾಂತರ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕಾತಿಯ ಬಗ್ಗೆ ಅಧಿಸೂಚನೆ ಸಂಖ್ಯೆ ಇಡಿ 88 ಪಿಎಂಎಸ್ 91 ದಿನಾಂಕ 21-10-91 ರಲ್ಲಿ ನಿಯಮಾವಳಿಗಳನ್ನು ರೂಪಿಸಿದ್ದು ಅದರಂತೆ ನೇಮಕಾತಿ ಮಾಡಿಕೊಳ್ಳಲು ಕ್ರಮ ಕೈಗೊಳ್ಳಲಾಗಿದೆ. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಸಹಾಯಕ ಶಿಕ್ಷಕರ ಹುದ್ದೆಗಳನ್ನು ಉದ್ಯೋಗ ವಿನಿಮಯ ಕೇಂದ್ರದಲ್ಲಿ ನೋಂದಾಯಿತ ಅರ್ಹ ಅಭ್ಯರ್ಥಿಗಳಿಂದ ಭರ್ತಿ ಮಾಡಲು ಈಗಾಗಲೇ ಕ್ರಮ ಕೈಗೊಳ್ಳಲಾಗಿದೆ.

ಸ್ನಾತಕೋತ್ತರ ಪದವಿ ಪಡೆದ ಅರ್ಹ ಸಹ ಶಿಕ್ಷಕರುಗಳ ಅಂತಿಮ ಜೇಷ್ಠತಾ ಪಟ್ಟಿಯನ್ನು ದಿನಾಂಕ 8-10-91ರಂದು ಪ್ರಕಟಿಸಲಾಗಿದ್ದು ಅರ್ಹ ಸಹ ಶಿಕ್ಷಕರಿಗೆ ಉಪನ್ಯಾಸಕರಾಗಿ ಬಡ್ತಿ ನೀಡುವ ಬಗ್ಗೆ ಹಾಗೂ ನೇರ ನೇಮಕಾತಿಯಿಂದ ತುಂಬುವ ಬಗ್ಗೆ ಸರ್ಕಾರದ ಪರಿಶೀಲನೆಯಲ್ಲಿದೆ.

ಚಿತ್ರದುರ್ಗ ಜಿಲ್ಲೆಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಹುದ್ದೆಗಳೂ ಸೇರಿದಂತೆ ಒಟ್ಟು 335 ಭೋದಕ ಖಾಲಿ ಹುದ್ದೆಗಳ ಪೈಕಿ 271 ಉಪನ್ಯಾಸಕರ ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗವು ಈಗಾಗಲೇ ಸಂದರ್ಶನಗಳನ್ನು ನಡೆಸುತ್ತಿದ್ದು. ಉಳಿದ 84 ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸಧ್ಯದಲ್ಲೇ ಕ್ರಮ ಕೈಗೊಳ್ಳಲಾಗುವುದು. ಇದೇ ಇಲಾಖೆಯಲ್ಲಿ ಖಾಲಿ ಇರುವ 'ಡಿ' ದರ್ಜೆ ಪರಿಚಾರಕರ ಹುದ್ದೆಗಳನ್ನು ಅರ್ಹ ದಿನಗೂಲಿ ನೌಕರರಿಂದ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.